ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 30/10/2019

# ಕೆಪಿಎಸ್ಸಿಗೆ ಸದಸ್ಯರನ್ನು ನೇಮಿಸಿ ಕಿಡಿಗೇಡಿಗಳಿಂದ ಅಧಿಸೂಚನೆ!

## ಡಿಪಿಎಆರ್ ಉಪ ಕಾರ್ಯದರ್ಶಿ ಸಹಿಯೇ ಫೋರ್ಜರಿ

ಕ.ಪ್ರ 30/10/19

ಬೆಂಗಳೂರು: ಕರ್ನಾಟಕ ಲೋಕಸೇವಾ ಆಯೋಗಕ್ಕೆ (ಕೆಪಿಎಸ್‌ಸಿ) ಸರ್ಕಾರದಿಂದ ಅಧಿಕಾರೇತರ ಸದಸ್ಯರೊಬ್ಬರ ನೇಮಕವಾದಂತೆ ಕಿಡಿಗೇಡಿಗಳು ನಕಲಿ ಅಧಿಸೂಚನೆ ಸೃಷ್ಟಿಸಿರುವ ಪ್ರಕರಣ ಬೆಳಕಿಗೆ ಬಂದಿದೆ. ಕೆ.ಎಚ್. ಅರುಣ್‌ಕುಮಾರ್ ಎಂಬುವವರನ್ನು ಕೆಪಿಎಸ್‌ಸಿಗೆ ಅಧಿಕಾರೇತರ ಸದಸ್ಯರಾಗಿ ನೇಮಕ ಮಾಡಲಾಗಿದೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಉಪಕಾರ್ಯದರ್ಶಿ ಹೆಸರಲ್ಲಿ ನಕಲಿ ಸಹಿ ಹಾಗೂ ಅಧಿಸೂಚನೆ ಸೃಷ್ಟಿಸಿ ಆಯೋಗಕ್ಕೆ ಕಳುಹಿಸಲಾಗಿದೆ. ಈ ಅಧಿಸೂಚನೆ ಬಗ್ಗೆ ಅನುಮಾನಗೊಂಡ ಕೆಪಿಎಸ್‌ಸಿ ಅಧ್ಯಕ್ಷರು ಸಿಬ್ಬಂದಿ ಮತ್ತು ಆಡಳಿತಾ ಸುಧಾರಣಾ ಇಲಾಖೆಯ ಅಧಿಕಾರಿಗಳಿಗೆ ಕರೆ ಮಾಡಿ ಸ್ಪಷ್ಟನೆ ಕೋರಿದಾಗ ಇದು ನಕಲಿ ಎಂಬ ವಿಚಾರ ಗಮನಕ್ಕೆ ಬಂದಿದೆ. ಈ ಸಂಬಂಧ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ಕೂಡ ದಾಖಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಡಿಪಿಎಆರ್) ಉಪ ಕಾರ್ಯದರ್ಶಿ ಎಂ.ಪಿ. ಮುಲ್ಲೈ ಮುಹಿಲನ್ ಅವರ ಸಹಿಯನ್ನು ಕಿಡಿ ಗೇಡಿಗಳು ನಕಲಿ ಮಾಡಿ ಈ ದಾಖಲೆ ಸೃಷ್ಟಿಸಿದ್ದಾರೆ. ಈ ಸಂಬಂಧ ಮುಹಿಲನ್ ಅವರೇ ದೂರು ನೀಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಕೆಪಿಎಸ್‌ಸಿ ಅಧ್ಯಕ್ಷ ಷಡಕ್ಷರಿಸ್ವಾಮಿ ಅವರ ವಾಟ್ ಆ್ಯಪ್‌ಗೆ ನಕಲಿ ಅಧಿಸೂಚನೆ ಕಳುಹಿಸಲಾಗಿತ್ತು. ಅವರ ಬಗ್ಗೆ ಅನುಮಾನಗೊಂಡಿದ್ದ ಷಡಕ್ಷರಿಸ್ವಾಮಿ, ಮುಲ್ಲೈ ಮುಹಿಲನ್‌ಗೆ ಕರೆ ಮಾಡಿ ವಿಚಾರಿಸಿದಾಗ ಅಕ್ರಮ ಬೆಳಕಿಗೆ ಬಂದಿದೆ.